ದಿನಾಂಕಃ 13.03.2026 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ಎದುರುದಾರರ ಪರ ವಕೀಲರಿಂದ :**

ಸಾಕ್ಷಿ ತಮ್ಮ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ, ಸದರಿ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯಗಳನ್ನು ಓದಿಸಿ ಕೇಳಿ ತಿಳಿದುಕೊಂಡು ಸರಿ ಮತ್ತು ಸತ್ಯವಾಗಿರುತ್ತವೆ ಎಂದು ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ.

**ಪಾಟೀ ಸವಾಲು : ಅರ್ಜಿದಾರರ ಪರ ವಕೀಲರಿಂದ :**

ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಎಲ್ಲಾ ಪೊಲೀಸ್ ದಾಖಲಾತಿಗಳನ್ನು ಪರಿಶೀಲಿಸಿರುತ್ತೇನೆ. ನನ್ನ ಅತಿವೇಗ ಹಾಗೂ ಅಜಾಗರೂಕತೆಯಿಂದ ಅಪಘಾತ ಉಂಟಾಗಿದೆ ಎಂದು ಪೊಲೀಸರು ಪ್ರಕರಣವನ್ನು ದಾಖಲಿಸಿಕೊಂಡಿರುತ್ತಾರೆ ಮತ್ತು ತನಿಖೆಯನ್ನು ಪೂರೈಸಿ ದೋಷಾರೋಪಣೆ ಪಟ್ಟಿಯನ್ನು ಸಹ ಸಲ್ಲಿಸಿರುತ್ತಾರೆ ಎಂದರೆ ಸರಿ. ಪೊಲೀಸರು ಸಲ್ಲಿಸಿದ ದೋಷಾರೋಪಣಾ ಪಟ್ಟಿಯನ್ನು ಪ್ರಶ್ನಿಸಿ ನಾನು ಮೇಲ್ಮನವಿ ಸಲ್ಲಿಸಿಲ್ಲ ಎಂದರೆ ಸರಿ.

**2.** ನನ್ನ ಕೆಲಸಕ್ಕೆ ತೊಂದರೆಯಾಗುತ್ತದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಧ್ಯವಾದರೇ ಪರಿಹಾರ ಕೊಡುವ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುವ ಉದ್ದೇಶಕ್ಕಾಗಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಎಂ.ಎ.ಸಿ.ಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**